# ಮಾಸ ಭವಿಷ್ಯ

ಅರುಣ ಪಿ. ಭಟ್



**ಮೇಷ:** ಮನೆಯ ದುರಸ್ತಿ, ನವೀಕರಣಕ್ಕೆ ಖರ್ಚು. ದಾನ ಧರ್ಮಗಳಲ್ಲಿ ಆಸಕ್ತಿ. ವ್ಯಾಪಾರ, ಉದ್ಯೋಗ ವಿಚಾರದಲ್ಲಿ ದೊಡ್ಡ ಅಧಿಕಾರಿಗಳು, ವ್ಯಾಪಾರಸ್ಥರ ಜತೆಗೆ ಮಾತುಕತೆ. ಕುಟುಂಬ ಬಾಂಧವ್ಯ ಗಟ್ಟಿಯಾಗುತ್ತದೆ. ಸಾಮಾಜಿಕ,ರಾಜಕೀಯ ಕ್ಷೇತ್ರದಲ್ಲಿ ಶ್ರಮಪಟ್ಟು ಕೆಲಸ ಮಾಡಬೇಕು. ಶುಭ: 12,21,26 ಅಶುಭ: 18,20,24.



**ವೃಷಭ:** ಉತ್ಸಾಹ ಹೆಚ್ಚಲಿದೆ. ಶ್ರಮದಿಂದ ಹಲವು ಕೆಲಸ ಕಾರ್ಯಗಳನ್ನು ಪೂರೈಸುವಿರಿ. ಇದರಿಂದ ಹೆಚ್ಚಿನ ಯಶಸ್ಸು ಪಡೆಯುವಿರಿ. ಸಹೋದ್ಯೋಗಿಗಳ ಜತೆಗಿನ ಭಿನ್ನಾಭಿಪ್ರಾಯ ಮರೆಯಲು ಯತ್ನಿಸುವಿರಿ. ತಿಂಗಳ ಕೊನೆಯಲ್ಲಿ ಹಣಕಾಸಿನ ಸ್ಥಿತಿ ಉತ್ತಮವಾಗಿರುತ್ತದೆ. ಶುಭ: 11,18,29 ಅಶುಭ: 15,23,28.



**ಮಿಥುನ:** ವ್ಯಾಪಾರಸ್ಥರಿಗೆ, ಉದ್ಯಮಿಗಳಿಗೆ ಲಾಭ. ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥಳದಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಿರಿ. ಸಾಮಾಜಿಕ ಸ್ಥಾನಮಾನ ಹೆಚ್ಚಲಿದೆ. ಉತ್ಸಾಹವೂ ಹೆಚ್ಚಾಗಲಿದೆ. ತಲೆ ನೋವು ಹಲ್ಲು ನೋವು ಕಾಣಿಸಿಕೊಳ್ಳಬಹುದು. ಶುಭ: 12,16,22 ಅಶುಭ: 21,26,29.



**ಕರ್ಕ:** ವಿದ್ಯಾರ್ಥಿಗಳಿಗೆ ಅತ್ಯುತ್ತಮವಾದ ಸಮಯವಿದು. ಉದ್ಯೋಗಿಗಳಿಗೆ ಬಡ್ತಿ ಸಿಗುವ ಸಾಧ್ಯತೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಬೇಡ, ಸ್ವಯಂ ವೈದ್ಯರಾಗಬೇಡಿ. ಮುಂಬರುವ ದಿನಗಳಲ್ಲಿ ಹಲವು ಅವಕಾಶಗಳು ಬರಲಿವೆ. ತಿಂಗಳ ಅಂತ್ಯದ ವೇಳೆ ತುಂಬ ಒಳ್ಳೆಯ ಮೊತ್ತ ದೊರೆಯಲಿದೆ. ಶುಭ: 19,23,29 ಅಶುಭ: 24,28,30.



**ಸಿಂಹ:** ಪ್ರಶಸ್ತಿ ಗೌರವಕ್ಕೆ ಪಾತ್ರರಾಗುವ ಯೋಗವಿದೆ. ಕಿರು ಪ್ರಯಾಣ ಮಾಡಬೇಕಾಗಿ ಬರಬಹುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಿರಿ. ವೃತ್ತಿಪರ ಕೆಲಸಗಳನ್ನು ಪರಿಣಾಮಕಾರಿಯಾಗಿ ಮಾಡುವಿರಿ. ವ್ಯಾಪಾರಸ್ಥರಿಗೆ ಉತ್ತಮ ಸಂಪರ್ಕ ದೊರೆಯಲಿದೆ. ಆದಾಯದಲ್ಲಿ ಹೆಚ್ಚಳ. ಶುಭ: 10,15,22 ಅಶುಭ: 18,20,24.



**ಕನ್ಯಾ:** ಕುಟುಂಬ ಸದಸ್ಯರು, ಬಂಧುಗಳು, ಪ್ರೀತಿಪಾತ್ರರೊಂದಿಗೆ ಉತ್ತಮ ಕ್ಷಣಗಳನ್ನು ಕಳೆಯಲಿದ್ದೀರಿ. ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಸಾಮಾಜಿಕ ರಾಜಕೀಯ ಕ್ಷೇತ್ರದಲ್ಲಿರುವವರಿಗೆ ಮನ್ನಣೆ ಸಿಗಲಿದೆ. ದೊಡ್ಡ ವ್ಯವಹಾರಗಳ ಬಗ್ಗೆ ತೀರ್ಮಾನ ಕೈಗೊಳ್ಳುವಾಗ ತಾಳ್ಮೆ ಇರಲಿ. ಶುಭ: 16,18,22 ಅಶುಭ: 17,20,24.



**ತುಲಾ:** ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಲಾಭ. ಸಿನಿಮಾ, ವೈದ್ಯಕೀಯ, ಕಲಾ ವೃತ್ತಿಯಲ್ಲಿರುವವರಿಗೆ ಲಾಭ. ತಿಂಗಳ ಮಧ್ಯಭಾಗದಲ್ಲಿ ಪ್ರಗತಿ ವೇಗ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆಯನ್ನು ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಒಟ್ಟಾರೆ ಆರೋಗ್ಯ ಚೆನ್ನಾಗಿರುತ್ತದೆ. ಶುಭ: 11.16.26. ಅಶುಭ. 14.18.28.



**ವೃಶ್ಚಿಕ:** ಈ ಮಾಸ ನಿಮಗೆ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಸಮಯದ ಕೊರತೆ ಕಾಡುತ್ತದೆ. ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆ ತಂದುಕೊಳ್ಳುತ್ತೀರಿ. ತಿಂಗಳ ಅಂತ್ಯದಲ್ಲಿ ಆರ್ಥಿಕ ಸ್ಥಿತಿ ಅತ್ಯುತ್ತಮವಾಗುತ್ತದೆ. ವೈಯಕ್ತಿಕ ಸಂಬಂಧಗಳು ಗಟ್ಟಿಗೊಳ್ಳುತ್ತವೆ. ಶುಭ: 13,20,27 ಅಶುಭ: 12,18,28.




**ಧನು:** ಆಸ್ತಿ ಖರೀದಿಗೆ ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷವಾಗಿ ಪರಿಶೀಲಿಸಿ. ಆರೋಗ್ಯ ಸಮಸ್ಯೆಗಳು ಕಾಡಬಹುದು. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳಾಗಬಹುದು. ಕುಟುಂಬದವರ ಬೆಂಬಲ ದೊರೆಯಲಿದೆ. ಒಡಹುಟ್ಟಿದವರೊಡನೆ ಬಾಂಧವ್ಯ ಗಟ್ಟಿಯಾಗುತ್ತದೆ. ಶುಭ: 14,22,29 ಅಶುಭ: 12,16,24.



**ಮಕರ:** ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ವ್ಯಾಪಾರ ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯ ತೀರ್ಮಾನ ಕೈಗೊಳ್ಳಲಿದ್ದೀರಿ. ವೈವಾಹಿಕ ಜೀವನ ಸಂತೋಷದಾಯಕವಾಗಿರುತ್ತದೆ. ಉದ್ಯೋಗ ನಿಮಿತ್ತವಾಗಿ ಪ್ರಯಾಣ ಮಾಡಬೇಕಾಗುತ್ತದೆ. ಶುಭ: 11,16,22 ಅಶುಭ: 12,21,29.



**ಕುಂಭ:** ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅವಕಾಶಗಳಿವೆ. ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ಗುರಿ ತಲುಪುವಿರಿ. ಸಂಗಾತಿಯ ಭಾವನೆಗಳಿಗೆ ಗೌರವ ನೀಡುತ್ತೀರಿ. ಶುಭ: 12,18,22 ಅಶುಭ: 13,19,24.



**ಮೀನ:** ಉನ್ನತ ಶಿಕ್ಷಣದಲ್ಲಿ ಯಶಸ್ಸು. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕ ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ತಂದೆಗೆ ಅಥವಾ ತಂದೆಯ ಸಮಾನರಾದವರಿಗೆ ಅನಾರೋಗ್ಯ ಕಾಡಬಹುದು. ತಿಂಗಳ ಮಧ್ಯ ಭಾಗದಲ್ಲಿ ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಶುಭ: 14,19,24 ಅಶುಭ: 15,20,22.